ಶ್ರೀ ಜಿ. ಪುಟ್ಟಸ್ವಾಮಿಗೌಡ.—ಮಾನ್ಯ ಅಧ್ಯಕ್ಷರೇ, ಈ ಸಮಸ್ಯೆ ಇತಿಹಾಸ ಇರತಕ್ಕಂಥ ಒಂದು ದೊಡ್ಡ ಸಮಸ್ಯೆ. ಇದು ಸುಮಾರು ೨೮ ವರ್ಷಗಳಿಂದ ಚಾಲೂವಿನಲ್ಲಿರತಕ್ಕಂಥ ಸಮಸ್ಯೆ ಆಗಿದೆ. ಈ ಸಮಸ್ಯೆಯ ಬಗ್ಗೆ ಈಗ ನಮ್ಮ ಸರ್ಕಾರ ಅತಿ ಶೀಘ್ರವಾಗಿ ಒಂದು ನಿರ್ಧಾರವನ್ನು ತೆಗೆದುಕೊಂಡು ಈ ಸಾರಿ ಸುಮಾರು ೧೫ ಲಕ್ಷ ರೂಪಾಯಿಗಳನ್ನು ಪುನರ್‌ವಸತಿ ಕಾರ್ಯಕ್ರಮಕ್ಕಾಗಿ ಇಟ್ಟುಕೊಂಡಿದ್ದೇವೆ. ಭೂಮಿ ಕೂಡ ಅಕ್ವೈರ್ ಮಾಡಿದ್ದೇವೆ. ಅತಿ ಶೀಘ್ರದಲ್ಲಿಯೇ ಮಾಡುತ್ತೇವೆ.

ಅಧ್ಯಕ್ಷರು.—ಪ್ರಶ್ನೋತ್ತರ ವೇಳೆ ಮುಗಿಯಿತು.

## ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು

ಶ್ರೀ ಎಂ. ವೀರಪ್ಪಮೊಯಿಲಿ.—ಮಾನ್ಯ ಅಧ್ಯಕ್ಷರೇ, ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳ ಪಟ್ಟಿಯನ್ನು ಸಭೆಯ ಮುಂದೆ ಮಂಡಿಸುತ್ತೇನೆ.

## ಉಡುಪಿ ತಾಲ್ಲೂಕಿನ ಕಟಪಾಡಿ ಹತ್ತಿರದ ಮಟ್ಟು ಅಣೆಕಟ್ಟು

೪೭೫ ಶ್ರೀ ಎ. ರುಕ್ಕಯ್ಯ ಪೂಜಾರಿ (ಪಟ್ಲ).—ಮಾನ್ಯ ಲೋಕೋಪಯೋಗಿ ಮತ್ತು ನೀರಾವರಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಉಡುಪಿ ತಾಲ್ಲೂಕಿನ ಕಟಪಾಡಿ ಹತ್ತಿರದ ಮಟ್ಟು ಅಣೆಕಟ್ಟಿನಿಂದ ರೈತರು ತೊಂದರೆಗೊಳಗಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಬಂದಿದ್ದರೆ ಅದನ್ನು ನಿವಾರಿಸಲು ಸರ್ಕಾರದವರು ಕೈಗೊಂಡ ಕ್ರಮಗಳೇನು?

ಇ) ಈ ರೀತಿ ನಷ್ಟ ಅನುಭವಿಸಿದ ರೈತರಿಗೆ ಸರ್ಕಾರವು ಪರಿಹಾರ ಧನ ನೀಡುವುದೇ?

ಶ್ರೀ ಜಿ. ಪುಟ್ಟಸ್ವಾಮಿಗೌಡ (ಲೋಕೋಪಯೋಗಿ ಮತ್ತು ನೀರಾವರಿ ಸಚಿವರು)—

ಅ) ಬಂದಿದೆ.

ಆ) ಅಣೆಕಟ್ಟಿನಿಂದ ನೀರು ಸರಾಗವಾಗಿ ಹೊರಗೆ ಹೋಗಲು ಕೆಲವು ಕಡೆ ದ್ವಾರಗಳನ್ನು ತೆರೆಯುವ ಕೆಲಸವು ನಡೆಯುತ್ತಿದ್ದು ಮುಗಿಯುವ ಹಂತದಲ್ಲಿದೆ.

ಇ) ನಿಯಮಗಳ ಪ್ರಕಾರ ಪರಿಹಾರ ಧನ ಕೊಡಲು ಅವಕಾಶವಿಲ್ಲ.

## ಅಡವಿಹನುಮಪ್ಪ ಏತ ನೀರಾವರಿ ಯೋಜನೆ

೮೮೧ ಶ್ರೀ ಕೆ. ಪೆಚ್. ಕುರಡಗಿ (ಮುಂಡರಗಿ).—ಮಾನ್ಯ ಲೋಕೋಪಯೋಗಿ ಮತ್ತು ನೀರಾವರಿ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಧಾರವಾಡ ಜಿಲ್ಲೆಯ ಮುಂಡರಗಿ ತಾಲ್ಲೂಕಿನಲ್ಲಿ ''ಅಡವಿಹನುಮಪ್ಪ'' ಏತ ನೀರಾವರಿ ಯೋಜನೆಯ ಅವಶ್ಯಕತೆ ಇರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೆ?

ಆ) ಹಾಗಿದ್ದಲ್ಲಿ ಈ ಬಗ್ಗೆ ಸರ್ಕಾರವು ತೆಗೆದುಕೊಂಡ ಕ್ರಮಗಳೇನು?

ಶ್ರೀ ಜಿ. ಪುಟ್ಟಸ್ವಾಮಿಗೌಡ (ಲೋಕೋಪಯೋಗಿ ಮತ್ತು ನೀರಾವರಿ ಸಚಿವರು)—

ಅ) ಮತ್ತು ಹೌದು. ಈ ಯೋಜನೆಗೆ ತುಂಗಭದ್ರಾ ಜಲಾಶಯದಲ್ಲಿ ನೀರಿನ

ಆ) ಲಭ್ಯತೆ ಇಲ್ಲದಿರುವುದರಿಂದ ಈ ಯೋಜನೆಯನ್ನು ಕೈಬಿಡಲಾಗಿದೆ.

## ಹಮ್ಮಿಗಿ ಏತ ನೀರಾವರಿ

೮೮೪ ಶ್ರೀ ಕೆ. ಪೆಚ್. ಕುರಡಗಿ (ಮುಂಡರಗಿ).—ಮಾನ್ಯ ಲೋಕೋಪಯೋಗಿ ಮತ್ತು ನೀರಾವರಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಧಾರವಾಡ ಜಿಲ್ಲೆಯ ಮುಂಡರಗಿ ತಾಲ್ಲೂಕಿನಲ್ಲಿ ಹಮ್ಮಿಗೆ ಏತ ನೀರಾವರಿ ಯೋಜನೆಯಿಂದ ಹೆಚ್ಚಿನ ಪ್ರಮಾಣದಲ್ಲಿ ನೀರಾವರಿಯಾಗದಿರಲು ಕಾರಣಗಳೇನು?